ದಿನಾಂಕ: 04.02.2023ರ ಶನಿವಾರ ಬೆಳಗ್ಗೆ 11.00 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 141 [99] ರಲ್ಲಿ ಶ್ರೀ ಆರ್. ಗಂಗಾಧರ, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಸುಭಾಸ್ ಪಾಟೀಲ್, ಸಹಾಯಕ ಅಭಿಯಂತರರು, ವಾರ್ಡ್ ನಂ. 99
2. ಶ್ರೀ ಪ್ರವೀಣ್.ಜೆ.ಜೆ. ಜೆ.ಇ. ಬೆಸ್ಕಾಂ
3. ಶ್ರೀ ರಮೇಶ್.ಎಸ್.ಟಿ. ಪಶು ಇಲಾಖೆ
4. ಶ್ರೀ ಮಂಜೇಗೌಡ, ಪೋಲಿಸ್ ಇಲಾಖೆ
5. ಶ್ರೀ ಮುನಿಸ್ವಾಮಿ, ಕಂದಾಯ ನಿರೀಕ್ಷಕರು
6. ಶ್ರೀ ಎಸ್. ರಾಜಣ್ಣ
7. ಶ್ರೀ ಆನಂದ್
8. ಶ್ರೀ ನಾಗರಾಜ್.ಎಸ್
9. ಶ್ರೀ ಉಮೇಶ್

ದಿನಾಂಕ: 04.02.2023 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡ್ ಸದಸ್ಯರು 19ನೇ ಮುಖ್ಯ ರಸ್ತೆಯಿಂದ ಸರ್ವಿಸ್ ರಸ್ತೆ ಹಾಗೂ ಕೆ.ಎಲ್.ಇ. ಕಾಲೇಜ್ ಮುಂಭಾಗ 25ನೇ ಅಡ್ಡ ರಸ್ತೆಗಳಲ್ಲಿ ಡಾಂಬರ್ ಹಾಕಿರುವ ಬಗ್ಗೆ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಈಗಾಗಲೇ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿರುತ್ತದೆ ಎಂದು ತಿಳಿಸಿದರು.

2. ವಾರ್ಡ್ ಸದಸ್ಯರು ಶ್ರೀ ರಾಜಣ್ಣ ರವರು ಒಂಟಿ ಮನೆ ಹಣವನ್ನು ಫಲಾನುಭವಿಗಳಿಗೆ ಪಾವತಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

3. ವಾರ್ಡ್ ಸದಸ್ಯರು ಶ್ರೀ ರಾಜಣ್ಣ ರವರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳು ವಿಳಂಭವಾಗುತ್ತಿರುವ ಬಗ್ಗೆ ಪ್ರಸ್ತಾಪಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಎಲ್ಲಾ ಗುತ್ತಿಗೆದಾರರಿಗೆ ಆದಷ್ಟು ಬೇಗನೆ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಸೂಚನೆ ನೀಡಿರುತ್ತಾರೆ.

4. ಸಭೆಯಲ್ಲಿ ವಾರ್ಡ್ ಸದಸ್ಯರು ಎಲ್.ಇ.ಡಿ. ಲೈಟ್ಸ್ ಗಳನ್ನು ಅಳವಡಿಸುತ್ತಿರುವ ಬಗ್ಗೆ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿ ಸಾಧ್ಯವಾದಷ್ಟು ಎಲ್ಲಾ ರಸ್ತೆಗಳಿಗೆ ಎಲ್.ಇ.ಡಿ. ಲೈಟ್ಸ್ ಗಳನ್ನು ಅಳವಡಿಸಿ, ಆದಷ್ಟು ಬೇಗನೆ ಪೂರ್ಣಗೊಳಿಸುವುದಾಗಿ ತಿಳಿಸಿದರು.

5. ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿಗಳು ಮರದ ರಂಬೆಗಳನ್ನು ತೆರವುಗೊಳಿಸುವಂತೆ ಮನವಿ ಮಾಡಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಅರಣ್ಯ ಇಲಾಖೆಯವರಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

6. ವಾರ್ಡ್ ಸದಸ್ಯರು ಕೆಲವು ರಸ್ತೆಗಳಲ್ಲಿ ಬೀದಿ ನಾಯಿಗಳ ಹಾವಳಿ ತಪ್ಪಿಸುವಂತೆ ಸಭೆಯಲ್ಲಿ ಕೋರಿದರು. ಇದಕ್ಕೆ ಉತ್ತರವಾಗಿ ಶ್ರೀ ರಮೇಶ್ , ಪಶು ಇಲಾಖೆಯವರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

7. ವಾರ್ಡ್ ಸದಸ್ಯರು ವಾರ್ಡ್ ರಸ್ತೆಗಳಲ್ಲಿ ಬಿದ್ದಿರುವ ಕಸವನ್ನು ತೆರವುಗೊಳಿಸುವಂತೆ ಕೋರಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಘನ ತ್ಯಾಜ್ಯ ಇಲಾಖೆಯವರಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

8. ವಾರ್ಡ್ ಸದಸ್ಯರು 19ನೇ ಮುಖ್ಯ ರಸ್ತೆಯಲ್ಲಿ ಹೊಸದಾಗಿ ನಿರ್ಮಾಣವಾಗುತ್ತಿರುವ ವಾರ್ಡ್ ಕಛೇರಿಯ ಕಾಮಗಾರಿ ಬಗ್ಗೆ ಪ್ರಸ್ತಾಪಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಕಾಮಗಾರಿಯು ಪ್ರಗತಿಯಲ್ಲಿದ್ದು, ಬೇಗನೆ ಮುಕ್ತಾಯಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸುವುದಾಗಿ ತಿಳಿಸಿದರು.

9. ವಾರ್ಡ್ ಸದಸ್ಯರು 41ನೇ ಅಡ್ಡ ರಸ್ತೆಯಲ್ಲಿ ನಿರ್ಮಾಣವಾಗುತ್ತಿರುವ ಪ್ರಥಮ ದರ್ಜೆ ಕಾಲೇಜಿನ ಕಾಮಗಾರಿಯ ಬಗ್ಗೆ ಪ್ರಸ್ತಾಪಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಈಗಾಗಲೇ ಮೊದಲನೇ ಮಹಡಿಯ ಆರ್.ಸಿ.ಸಿ. ಸ್ಲ್ಯಾಬ್ ಆಗಿದ್ದು, 2ನೇ ಮಹಡಿಯ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99